ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿ.ಸಿ. ಸಂಖ್ಯೆ: 74/2023**

ಪ್ರ.ವ.ಬೋ.ತಾಃ 22-07-2026

ಚಾಸಾಃ 12 ಫ್ರಾಸಾಃ 11

| | |
|---|---|
| ಸಾಕ್ಷಿಯ ಹೆಸರು | ನರಸಿಂಹಮೂರ್ತಿ |
| ತಂದೆ/ಗಂಡನ ಹೆಸರು | ನರಸಪ್ಪ |
| ವಯಸ್ಸು | 46 ವರ್ಷ |
| ವೃತ್ತಿ | ಮೇಕೆ ಸಾಕಾಣಿಕೆ |
| ವಾಸ | ಹಂದ್ರಾಳು, ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ಆರೋಪಿತರನ್ನು ನಾನು ನೋಡಿರುವುದಿಲ್ಲ. ಚಾಸಾ.4 ಮತ್ತು 5 ರವರು ಗೊತ್ತಿಲ್ಲ. ಈ ಕೇಸಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ- ಮಾನ್ಯ ಸ.ಸ.ಅ. ರವರಿಂದಃ-**

1998 ನೇ ಸಾಲಿನಲ್ಲಿ ಚಾಸಾ.4 ರವರು ಬ್ಯಾಲ್ಯ ಗ್ರಾಮ ಪಂಚಾಯಿತಿಯ ವಾಟರ್ ಮನ್ ಆಗಿದ್ದರು ಎಂದರೆ ನನಗೆ ಗೊತ್ತಿಲ್ಲ. ಆನಂತರ 2007 ನೇ ಸಾಲಿನಲ್ಲಿ ಚಾಸಾ.4 ರವರು ಬಿಲ್ ಕಲೆಕ್ಟರ್ ಆಗಿ ಪದೋನ್ನತಿ ಹೊಂದಿದರು ಎಂದರೆ ನನಗೆ ಗೊತ್ತಿಲ್ಲ. ಚಾಸಾ.4 ರವರು

2001-02 ನೇ ಸಾಲಿನಲ್ಲಿ ಬ್ಯಾಲ್ಯ ಗ್ರಾಮ ಪಂಚಾಯಿತಿವತಿಯಿಂದ ಲಿಡ್ಕರ್ ವಸತಿ ಯೋಜನೆಯಡಿ ಮನೆ ನಿರ್ಮಿಸಲು ರೂ.ಹತ್ತು ಸಾವಿರ ಹಣವನ್ನು ಪಡೆದುಕೊಂಡಿದ್ದರು ಎಂದರೆ ಸರಿಯಲ್ಲ. ಆ ಮನೆ ಬಿದ್ದು ಹೋದ ಕಾರಣ ಚಾಸಾ.4 ರವರ ಹೆಂಡತಿ ಚಾಸಾ.5 ರವರು 2009 ನೇ ಸಾಲಿನಲ್ಲಿ ಹಂದ್ರಾಳು ಗ್ರಾಮ ಠಾಣಾ ವ್ಯಾಪ್ತಿಯಲ್ಲಿ ನಿವೇಶನ ಕೋರಿ ಪಂಚಾಯಿತಿಗೆ ಅರ್ಜಿ ಸಲ್ಲಿಸಿದ್ದರು ಎಂದರೆ ಸರಿಯಲ್ಲ. ಆ ಕಾರಣ ಗ್ರಾಮ ಪಂಚಾಯಿತಿಯಲ್ಲಿ ಸಾಮಾನ್ಯ ಸಭೆ ಕರೆದು ಚಾಸಾ.5 ಹಾಗೂ ಇತರ ಐದು ಜನರಿಗೆ 30x40 ಅಳತೆಯ ನಿವೇಶನ ಮಂಜೂರಾಗಿತ್ತು ಎಂದರೆ ಸರಿಯಲ್ಲ. ಚಾಸಾ.5 ರವರಿಗೆ ಇಂದಿರಾ ಆವಾಜ್ ಯೋಜನೆಯಡಿ ಒಟ್ಟು ನಾಲ್ಕು ಹಂತಗಳಲ್ಲಿ ರೂ.1,19,800/- ಹಣವನ್ನು ಮಂಜೂರಾಗಿದ್ದು, ಆ ಹಣದಲ್ಲಿ ಮನೆಯನ್ನು ಕಟ್ಟಿಕೊಂಡಿದ್ದರು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಆ ಅಲ್ಲಗೆಳೆದ ಹೇಳಿಕೆಯನ್ನು ನಿಪಿ.15 ಎಂದು ಗುರುತಿಸಲಾಯಿತು. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ- ಆರೋಪಿತರ ಪರ ವಕೀಲರಿಂದಃ-** ಏನೂ ಇಲ್ಲ.

ಮರು ವಿಚಾರಣೆಃ- ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ